**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ :- ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಡ್ಯ ಇಲ್ಲಿ ಕೈಗೊಳ್ಳಲಾಗಿರುವ ಕೃಷಿ ಇಲಾಖೆಯ ಕಾಮಗಾರಿಗಳ ತನಿಖೆ ಮಾಡಲು ತನಿಖಾಧಿಕಾರಿಯನ್ನು ನೇಮಿಸುವ ಬಗ್ಗೆ- ಆದೇಶ

ಓದಲಾಗಿದೆ :- ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರೀಮಗ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ : ಮುಇಂ / ಪಂರಾಇಂಇ / ಸಿ-11 / 09 /ದೂರು / 2017-18/475, ದಿ: 02.05.2017

*****

**ಪ್ರಸ್ತಾವನೆ :**

ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ಮೇಲೆ ಓದಲಾದ ದಿನಾಂಕ : 02.05.2017ರ ಪತ್ರದಲ್ಲಿ ಮಂಡ್ಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ಕೈಗೊಳ್ಳಲಾಗಿರುವ ಕೃಷಿ ಇಲಾಖೆಗೆ ಸಂಬಂಧಿಸಿದ ಕಾಮಗಾರಿಗಳಲ್ಲಿ ಅಕ್ರಮಗಳು ಆಗಿರುವ ಬಗ್ಗೆ ದೂರು ಸ್ವೀಕೃತವಾಗಿದ್ದು, ಸದರಿ ಕಾಮಗಾರಿಗಳ ಬಗ್ಗೆ ತನಿಖೆ ನಡೆಸಲು ಓರ್ವ ರಾಜ್ಯ ಗುಣ ನಿಯಂತ್ರಕರವರನ್ನು ತನಿಖಾಧಿಕಾರಿಯನ್ನಾಗಿ ನೇಮಿಸಲು ಕೋರಿರುತ್ತಾರೆ.

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 1091 ಉಖಾಯೋ 2014, ದಿನಾಂಕ : 27.02.2015ರನ್ವಯ ಹಾಲಿ ರಾಜ್ಯ ಗುಣ ನಿಯಂತ್ರಕರವರ ಪಟ್ಟಿಯಲ್ಲಿರುವ ಹೆಸರುಗಳ ಪೈಕಿ ಒಬ್ಬರಾದ ಶ್ರೀ ಬಸವರಾಜ ಚಿಕ್ಕನರಗುಂದ, ಬನಶಂಕರಿ, ಬೆಂಗಳೂರು ಇವರನ್ನು ಈ ಪ್ರಕರಣದಲ್ಲಿ ತನಿಖಾಧಿಕಾರಿಯನ್ನಾಗಿ ನೇಮಿಸಲು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 193 ಜಿಪಅ 2017, ಬೆಂಗಳೂರು, ದಿನಾಂಕ : 21.06.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಮಂಡ್ಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ಕೈಗೊಳ್ಳಲಾಗಿರುವ ಕೃಷಿ ಇಲಾಖೆಗೆ ಸಂಬಂಧಿಸಿದ ಕಾಮಗಾರಿಗಳಲ್ಲಿ ಅಕ್ರಮಗಳು ಆಗಿರುವ ಬಗ್ಗೆ ತನಿಖೆ ನಡೆಸಲು ಶ್ರೀ ಬಸವರಾಜ ಚಿಕ್ಕನರಗುಂದ, ಬನಶಂಕರಿ, ಬೆಂಗಳೂರು, ರಾಜ್ಯ ಗುಣನಿಯಂತ್ರಕ ಇವರನ್ನು ಈ ಪ್ರಕರಣದಲ್ಲಿ ತನಿಖಾಧಿಕಾರಿಯನ್ನಾಗಿ ನೇಮಿಸಿದೆ.

ತನಿಖಾಧಿಕಾರಿಗಳು ಈ ಪ್ರಕರಣದಲ್ಲಿ ನಿಯಮಾನುಸಾರ ತನಿಖೆ ಕೈಗೊಂಡು, ವರದಿಯನ್ನು ಒಂದು ತಿಂಗಳ ಒಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ತನಿಖಾಧಿಕಾರಿಗಳು ತನಿಖಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಗೌರವಧನವನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

15/06/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ :-

1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ

3. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಡ್ಯ
4. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಮಂಡ್ಯ
5. ಶ್ರೀ ಬಸವರಾಜ ಚಿಕ್ಕನರಗುಂದ ಬಿನ್ ವೀರಪ್ಪ, # 96, ಮಂದಾರ, 3ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, 3ನೇ ಹಂತ, 4ನೇ ಫೇಸ್, 7ನೇ ಬ್ಲಾಕ್, ಬನಶಂಕರಿ, ಬೆಂಗಳೂರು-85.

ಪ್ರತಿಯನ್ನು :

1. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ
2. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸುವ ಸಲುವಾಗಿ
3. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

*****